ನೀರಾವರಿಗೆ ಅನುದಾನ

2085 (3424); ಶ್ರೀ ಅಶೋಕ್ ಖೇಣಿ (ಬೀದರ್ ದಕ್ಷಿಣ)

ಅ) 2014–15ನೇ ಸಾಲಿನ ಆಯವ್ಯಯದಲ್ಲಿ ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿ ಕೇಂದ್ರ ಸರ್ಕಾರದ ಅನುದಾನದಲ್ಲಿ ನೀರಾವರಿ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ:

ಆ) ಬಿಡುಗಡೆ ಮಾಡಿದ್ದಲ್ಲಿ ಯಾವ ಯಾವ ಯೋಜನೆಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ: (ಅಂಕಿ ಅಂಶಗಳೊಂದಿಗೆ ವಿವರ ನೀಡುವುದು):

ಇ) ಹೊಸ ಯೋಜನೆಗಳಿಗೆ ಸರ್ಕಾರ ಮಟ್ಟದಲ್ಲಿ ಪ್ರಸ್ತಾವನೆ ಬಂದಿದೆಯೇ?

ಶ್ರೀ ಎಂ.ಬಿ. ಪಾಟೀಲ (ಜಲ ಸಂಪನ್ಮೂಲ ಸಚಿವರು)(ಭಾರಿ ಮತ್ತು ಮಧ್ಯಮ ನೀರಾವರಿ)

ಅ) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿ ಬರುವ ಕಾರಂಜಾ ನೀರಾವರಿ ಯೋಜನೆಗೆ ಎಐಟಿಪಿ ಅಡಿಯಲ್ಲಿ ಕೇಂದ್ರ ಧನ ಸಹಾಯ ಪಡೆಯಲಾಗುತ್ತಿದೆ. 2014–15ನೇ ಸಾಲಿನಲ್ಲಿ ಈ ಯೋಜನೆಗೆ ಕೇಂದ್ರ ಧನ ಸಹಾಯ ಪಡೆಯಲು ಪ್ರಸ್ತಾವನೆ ಸಲ್ಲಿಸುವ ಹಂತದಲ್ಲಿರುತ್ತದೆ.

ಆ) ಉದ್ಭವಿಸುವುದಿಲ್ಲ.

ಇ) ಯಾವುದೂ ಇರುವುದಿಲ್ಲ.